# ಕನ್ನಡ ಪೋಸ್ಟ್

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಸಂಪಾದಕ : ಮಂಜು ಬನವಾಸೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 162 | Pages. 2 | Date: 04-06-2026, THURSDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 162 - ಪುಟಗಳು : 2 | 04-06-2026 | ಗುರುವಾರ | Ph: 8762954248 | ದರ : ₹1


# ಡಿ.ಕೆ.ಶಿ ರಾಜ್ಯಭಾರ ಆರಂಭ

## ನಾಡಿನ 25ನೇ ಸಿಎಂ ಆಗಿ ಪ್ರಮಾಣ ವಚನ: ಸಚಿವರಾದ 13 ಮಂದಿ ಶಾಸಕರು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**


ಬೆಂಗಳೂರು: ಕರ್ನಾಟಕದ 25ನೇ ಸಿಎಂ ಆಗಿ ಡಿ.ಕೆ ಶಿವಕುಮಾರ್ ಇಂದು ಸಂಜೆ 4.05ಕ್ಕೆ ಲೋಕಭವನದಲ್ಲಿ ಗಂಗಾಧರ ಅಜ್ಜನ ಹೆಸರಿನ ಮೇಲೆ ಪ್ರಮಾಣ ವಚನ ಸ್ವೀಕಾರ ಮಾಡಿದರು. ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಪ್ರಮಾಣ ವಚನ ಬೋಧಿಸಿದರು. ಭಾರತದ ಸಂವಿಧಾನದ ಪ್ರತಿಯನ್ನು ಹಿಡಿದುಕೊಂಡು ಪ್ರಮಾಣ ವಚನ ಸ್ವೀಕರಿಸಿದರು ಮತ್ತು ಅಜ್ಜಯ್ಯ ಸ್ವಾಮೀಜಿಯವರ ಛಾಯಾಚಿತ್ರಕ್ಕೆ ಗೌರವ ಸಲ್ಲಿಸಿದರು. ಅವರು ತಮ್ಮ ಆಧ್ಯಾತ್ಮಿಕ ಗುರು ವೀರಗಂಗಾಧರಾಚಾರ್ ಅವರ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದರು.

ಡಿಕೆಶಿ ಅವರೊಂದಿಗೆ 13 ಮಂದಿ ಶಾಸಕರು ಪದಗ್ರಹಣ ಮಾಡಿದರು.

ಡಿಕೆಶಿ ನಂತರ ಡಾ.ಜಿ.ಪರಮೇಶ್ವರ್ ಡಾ ಬಿಆರ್ ಅಂಬೇಡ್ಕರ್ ಅವರ ಹೆಸರಿನಲ್ಲಿ ಡಿಸಿಎಂ ಆಗಿ ಪ್ರಮಾಣವಚನ ಸ್ವೀಕರಿಸಿದ್ದು ವಿಶೇಷವಾಗಿತ್ತು.

ಮೂರನೇಯವರಾಗಿ ಕೆ.ಹೆಚ್.ಮುನಿಯಪ್ಪ, ನಂತರದಲ್ಲಿ ಕೆ.ಜೆ.ಜಾರ್ಜ್, ಎಂ.ಪಿ.ಪಾಟೀಲ್, ಸತೀಶ್ ಜಾರಕಿಹೊಳಿ, ಕೃಷ್ಣ ಬೈರೇಗೌಡ ಸಂಪುಟ ದಜೆ ಸಚಿವರಾಗಿ ಪ್ರಮಾಣ ವಚನ ಸ್ವೀಕಾರ ಮಾಡಿದರು.

ಕಾರ್ಯಕ್ರಮದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ, ಮಾಜಿ ಸಿಎಂ ಸಿದ್ದರಾಮಯ್ಯ, ಕರ್ನಾಟಕ ಉಸ್ತುವಾರಿ ರಣದೀಪ್ ಸುರ್ಜೇವಾಲ ಮತ್ತು ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆಸಿ ವೇಣುಗೋಪಾಲ್ ನೆರೆಯ ತೆಲಂಗಾಣ ಮತ್ತು ಕೇರಳ ಸಿಎಂಗಳು, ವಿವಿಧ ಕ್ಷೇತ್ರಗಳ ಗಣ್ಯರು, ಶ್ರೀ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಶ್ರೀ ಡಾ.ನಿರ್ಮಲಾನಂದನಾಥ ಸ್ವಾಮೀಜಿ ಸೇರಿದಂತೆ ಸರ್ವಧರ್ಮದ 55 ಧರ್ಮಗುರುಗಳು, ಡಿಕೆಶಿ ಅವರ ಕುಟುಂಬದ ಸದಸ್ಯರು, ಇನ್ಫೋಸಿಸ್ ಸಹ-ಸಂಸ್ಥಾಪಕ ನಾರಾಯಣ ಮೂರ್ತಿ ಮತ್ತು ಅವರ ಪತ್ನಿ ಹಾಗೂ ರಾಜ್ಯಸಭಾ ಸದಸ್ಯೆ ಸುಧಾ ಮೂರ್ತಿ, ಮಾಜಿ ಕ್ರಿಕೆಟಿಗ ಅನಿಲ್ ಕುಂಬ್ಳೆ, ನಟರಾದ ಜಯಮಾಲಾ ಮತ್ತು ಶಿವರಾಜ್‌ಕುಮಾರ್, ಮಾಜಿ ಸಚಿವರು, ಶಾಸಕರು, ಕಾಂಗ್ರೆಸ್ ಪಕ್ಷದ ಹಿರಿಯ ನಾಯಕರು, ಮುಖಂಡರು ಉಪಸ್ಥಿತರಿದ್ದರು.



### ಪ್ರಮಾಣ ಸ್ವೀಕರಿಸಿದ ಶಾಸಕರು

| | | |
|---|---|---|
| ಡಿ.ಕೆ.ಶಿವಕುಮಾರ್, ಸಿಎಂ | ಕೃಷ್ಣ ಬೈರೇಗೌಡ, ಸಚಿವ | ರಾಮಲಿಂಗಾರೆಡ್ಡಿ, ಸಚಿವ |
| ಡಾ. ಜಿ.ಪರಮೇಶ್ವರ್, ಡಿಸಿಎಂ | ಯು.ಟಿ.ಖಾದರ್, ಸಚಿವ | ಈಶ್ವರ್ ಖಂಡ್ರೆ, ಸಚಿವ |
| ಸತೀಶ್ ಜಾರಕಿಹೊಳಿ, ಸಚಿವ | ಎಂ.ಬಿ.ಪಾಟೀಲ್, ಸಚಿವ | ಭೈರತಿ ಸುರೇಶ್, ಸಚಿವ |
| ಕೆ.ಹೆಚ್.ಮುನಿಯಪ್ಪ, ಸಚಿವ | ಕೆ.ಜೆ.ಜಾರ್ಜ್, ಸಚಿವ | ಡಾ.ಎಸ್.ಪ್ರಕಾಶ್ ಪಾಟೀಲ್, ಸಚಿವ |
| ಪ್ರಿಯಾಂಕ್ ಖರ್ಗೆ, ಸಚಿವ | | ಡಾ.ಯತೀಂದ್ರ ಸಿದ್ರಾಮಯ್ಯ, ಸಚಿವ |

### ಜಾತಿವಾರು ಹಂಚಿಕೆ ಇಂದು ಸಂಪುಟದ ಮೊದಲ ಭಾಗ

ಒಟ್ಟು 14 ಶಾಸಕರು ಪ್ರಮಾಣ ವಚನ ಸ್ವೀಕಾರ ಮಾಡಿದರು. ಈ ಪೈಕಿ ಒಕ್ಕಲಿಗರ ಕೋಟಾದಲ್ಲಿ ಡಿ.ಕೆ.ಶಿವಕುಮಾರ್ ಸೇರಿ ಮೂವರಿಗೆ ಸ್ಥಾನ ನೀಡಲಾಗಿದ್ದರೆ, ಲಿಂಗಾಯತ ಕೋಟಾದಲ್ಲಿ ಮೂವರು, ದಲಿತ ಕೋಟಾದಡಿ ಪರಮೇಶ್ವರ್ ಸೇರಿ ಮೂವರು, ಕುರುಬ ಸಮುದಾಯದಡಿ ಇಬ್ಬರಿಗೆ ಸಚಿವ ಸ್ಥಾನ ಹಂಚಿಕೆ ಮಾಡಲಾಗಿದೆ. ಇನ್ನು ಎಸ್‌ಟಿ, ಮುಸ್ಲಿಂ, ಕ್ರಿಶ್ಚಿಯನ್ ಕೋಟಾದಡಿ ತಲಾ ಒಬ್ಬರಿಗೆ ಸ್ಥಾನ ನೀಡಲಾಗಿದೆ.

### ಹೆಚ್ಡಿಡಿ-ಬಿಎಸ್‌ವೈ ಆಶೀರ್ವಾದ

ಪ್ರಮಾಣ ವಚನ ಸ್ವೀಕಾರಕ್ಕೂ ಮುನ್ನ ಡಿ.ಕೆ ಶಿವಕುಮಾರ್ ಅವರು ರಾಜ್ಯದ ಇಬ್ಬರು ಪ್ರಭಾವಿ ಜಾತಿ ಸಮುದಾಯಗಳ ಪ್ರಶ್ನಾತೀತ ನಾಯಕರನ್ನು ಭೇಟಿ ಮಾಡಿ ಆಶೀರ್ವಾದ ಪಡೆದರು. ರಾಜ್ಯದ ಇಬ್ಬರು ಧೀಮಂತ ಮುತ್ಸದ್ದಿ ನಾಯಕರಾದ ಮಾಜಿ ಪ್ರಧಾನಿ ಹೆಚ್.ಡಿ ದೇವೇಗೌಡರು ಮತ್ತು ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ಮನೆಗೆ ಭೇಟಿ ನೀಡಿ ಆಶೀರ್ವಾದ ಪಡೆದರು. ಇದರೊಂದಿಗೆ ಡಿ.ಕೆ ಶಿವಕುಮಾರ್ ಎಚ್ಚರಿಕೆ ಹೆಜ್ಜೆ ಇಟ್ಟಿದ್ದಾರೆ. ರಾಜಕೀಯ ಬದ್ಧ ವೈರಿಗಳ ಭೇಟಿಯ ಹಿಂದೆ ಕೇವಲ ಸೌಜನ್ಯ ಮಾತ್ರವಲ್ಲ ಬದಲಿಗೆ ಅತ್ಯಂತ ವ್ಯವಸ್ಥಿತ ದೂರದೃಷ್ಟಿಯ ರಾಜಕೀಯ ಲೆಕ್ಕಾಚಾರಮೂ ಇದೆ ಎಂದು ವಿಶ್ಲೇಷಿಸಲಾಗುತ್ತಿದೆ.

ಒಟ್ಟಿನಲ್ಲಿ ಇಂದಿನಿಂದ ಕರ್ನಾಟಕದಲ್ಲಿ ಡಿ.ಕೆ.ದರ್ಬಾರ್ ಶುರುವಾಗಿದ್ದು, ನಾಡಿನ ಜನರಲ್ಲಿ ಸಾಕಷ್ಟು ನಿರೀಕ್ಷೆ ಮೂಡಿಸಿದೆ.

## ಅತ್ಯಾಚಾರ: ಆರೋಪಿ ಸೆರೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಪಾನೀಪುರಿ ವ್ಯಾಪಾರಿ ಯುವಕನೊಬ್ಬ ಡ್ರಾಪ್ ಕೊಡುವ ನೆಪದಲ್ಲಿ ಅಪ್ರಾಪ್ತ ಬಾಲಕಿಯೊಬ್ಬಳನ್ನು ಕರೆದೊಯ್ದು ಅತ್ಯಾಚಾರ ನಡೆಸಿರುವ ಘಟನೆ ನಗರದ 80 ಅಡಿ ರಸ್ತೆ ಬಳಿ ನಡೆದಿದೆ.

ಆರೋಪಿ ಸಾಗರ್ (21) ಎಂಬಾತನ ವಿರುದ್ಧ ಮಹಿಳಾ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಬಾಲಕಿ ಆರೋಪಿಯ ಪಾನಿಪುರಿ ಅಂಗಡಿಗೆ ಆಗಾಗ್ಗೆ ಬಂದು ಪಾನಿಪುರಿ ಸೇವಿಸುತ್ತಿದ್ದರಿಂದ ಆತನಿಗೆ ಪರಿಚಿತಳಾಗಿದ್ದಳು ಎನ್ನಲಾಗಿದೆ.

ಹೀಗಾಗಿ ಇಬ್ಬರ ನಡುವೆ ಪರಿಚಯ ಇತ್ತು. ಈ ನಡುವೆ ಇತ್ತೀಚೆಗೆ ಬಾಲಕಿಯನ್ನು ಪುಸಲಾಯಿಸಿ 80 ಅಡಿ ರಸ್ತೆಯ ಗದ್ದೆ ಹಳ್ಳಕ್ಕೆ ಕರೆದೊಯ್ದಿದ್ದ ಕೀಚಕ ಸಾಗರ್, ಅತ್ಯಾಚಾರ ಎಸಗಿದ್ದಾನೆ.

ಕೃತ್ಯ ನಡೆದ ನಂತರಮೂ ಅದೇ ಬೈಕ್‌ನಲ್ಲಿ ಡ್ರಾಪ್ ಕೊಡಲು ಕರೆದುಕೊಂಡು ಬರುತ್ತಿದ್ದಾಗ ಹೆದರಿ ಅಪ್ರಾಪ್ತೆ ಕಿರುಚಿಕೊಂಡಿದ್ದಾಳೆ. ವಿಷಯ ತಿಳಿದ ಸ್ಥಳೀಯರು ಆತಂಕದಲ್ಲಿದ್ದ ಬಾಲಕಿಯನ್ನು ರಕ್ಷಣೆ ಮಾಡಿ, ವಿಚಾರಿಸಿದಾಗ ಪೈಶಾಚಿಕ ಕೃತ್ಯ ನಡೆದಿರುವುದು ಬೆಳಕಿಗೆ ಬಂದಿದೆ. ಈ ಸಂಬಂಧ ನಗರದ ಮಹಿಳಾ ಠಾಣೆಯಲ್ಲಿ ಅತ್ಯಾಚಾರ ಪ್ರಕರಣ ದಾಖಲಾಗಿದೆ. ಕೂಡಲೇ ಕ್ಷಿಪ್ರ ಕಾರ್ಯಾಚರನೆ ನಡೆಸಿದ

ಪಿಎಸ್‌ಐ ಮಧು ಹಾಗೂ ಅವರ ತಂಡವು ಕಾಮುಕ ಯುವಕನನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ.

## ಬೇಲೂರು: ಎರಡು ದಿನ ವಿದ್ಯುತ್ ವ್ಯತ್ಯಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದಿಂದ ಜೂ,04 ರಂದು 66/11 ಕೆವಿ ಬೇಲೂರು ಮತ್ತು ಗೆಂಡೇಹಳ್ಳಿ ಹಾಗೂ ಜೂ.05 ರಂದು 66/11 ಕೆವಿ ಸಕಲೇಶಪುರ, ಬಾಳ್ಳುಪೇಟೆ ಮತ್ತು ಕಂದಲಿಂ ವಿವಿ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕೆಲಸವನ್ನು ಹಮ್ಮಿಕೊಂಡಿರುವುದರಿಂದ ಜೂ.04 ಮತ್ತು ಜೂ.05 ರಂದು ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗುವುದರಿಂದ ಸಾರ್ವಜನಿಕರು ಸಹಕರಿಸುವಂತೆ ಕಾರ್ಯನಿರ್ವಾಹಕ ಇಂಜಿನಿಯರ್ ತಿಳಿಸಿದ್ದಾರೆ.

## ಹಾಸನದಲ್ಲೂ ಡಿಕೆಶಿ ಪರ ಸಂಭ್ರಮಾಚರಣೆಗೆ ಸಿದ್ಧತೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ರಾಜ್ಯದ ನೂತನ 25ನೇ ಮುಖ್ಯಮಂತ್ರಿಯಾಗಿ ಡಿ.ಕೆ. ಶಿವಕುಮಾರ್ ಪದಗ್ರಹಣ ಮಾಡುತ್ತಿರುವ ಹಿನ್ನೆಲೆಯಲ್ಲಿ ನಗರದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಸಂಭ್ರಮಾಚರಣೆಗೆ ಸಿದ್ಧತೆ ನಡೆಸಿದ್ದಾರೆ ಎಂದು ಕಾಂಗ್ರೆಸ್ ಮುಖಂಡ ಬನವಾಸೆ ರಂಗಸ್ವಾಮಿ ತಿಳಿಸಿದರು.

ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷಕ್ಕಾಗಿ ಸತತ ಶ್ರಮ, ತ್ಯಾಗ ಹಾಗೂ ಸೇವೆ ಸಲ್ಲಿಸಿರುವ ಡಿ.ಕೆ. ಶಿವಕುಮಾರ್ ಅವರಿಗೆ ಮುಖ್ಯಮಂತ್ರಿ ಹುದ್ದೆ ದೊರೆತಿರುವುದು ಪಕ್ಷದ ಕಾರ್ಯಕರ್ತರಿಗೆ ಸಂತಸದ ಸಂಗತಿಯಾಗಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಈ ಹಿನ್ನೆಲೆಯಲ್ಲಿ ನಗರದ ಹೇಮಾವತಿ ಪ್ರತಿಮೆ ಬಳಿ ಕಾಂಗ್ರೆಸ್ ಕಾರ್ಯಕರ್ತರು ಸೇರಿ ಸಂಭ್ರಮಾಚರಣೆ ನಡೆಸಲಿದ್ದು, ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಆಹ್ವಾನ ನೀಡಿದರು.




ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ದೂರದೃಷ್ಟಿಯ ನಿರ್ಧಾರದಿಂದ ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿ ಹುದ್ದೆ ಅಲಂಕರಿಸುತ್ತಿದ್ದು, ಈ ನಡೆ ರಾಜ್ಯದ ರಾಜಕೀಯ ಇತಿಹಾಸದಲ್ಲಿ ಮಾದರಿಯಾಗಲಿದೆ ಎಂದು ಅಭಿಪ್ರಾಯಪಟ್ಟರು.

ಸಿದ್ದರಾಮಯ್ಯ ಅವರ ಆಡಳಿತ ಹಾಗೂ ರಾಜ್ಯಕ್ಕೆ ನೀಡಿರುವ ಕೊಡುಗೆ ಶ್ಲಾಘನೀಯವಾಗಿದ್ದು, ಅವರಿಗೆ ಕೃತಜ್ಞತೆ ಸಲ್ಲಿಸಿದರು. ಜಿಲ್ಲೆಯಲ್ಲಿ ಐಟಿ ಕಂಪನಿಗಳು ಹಾಗೂ ಐಟಿ ಹಬ್‌ಗಳನ್ನು ಸ್ಥಾಪಿಸುವುದು ತಮ್ಮ ಬಹುಕಾಲದ ಕನಸಾಗಿದ್ದು, ಈ ಕುರಿತು ನೂತನ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಗುವುದು ಎಂದರು.

ಐಟಿ ಕ್ಷೇತ್ರದ ಅಭಿವೃದ್ಧಿಯಿಂದ ಜಿಲ್ಲೆಯ ಯುವಕ-ಯುವತಿಯರಿಗೆ ಹೆಚ್ಚಿನ ಉದ್ಯೋಗಾವಕಾಶ ಸೃಷ್ಟಿಯಾಗಿ, ತಮ್ಮ ಊರಿನಲ್ಲಿಯೇ ಉತ್ತಮ ಜೀವನ ಕಟ್ಟಿಕೊಳ್ಳಲು ಸಾಧ್ಯವಾಗಲಿದೆ ಎಂದು ಹೇಳಿದರು.

ಮುಂದಿನ ದಿನಗಳಲ್ಲಿ ಹಾಸನ ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷ ಮತ್ತಷ್ಟು ಬಲಿಷ್ಠವಾಗಲಿದ್ದು, 2028ರ ವಿಧಾನಸಭಾ ಚುನಾವಣೆಯಲ್ಲಿ ಜಿಲ್ಲೆಯ ಏಳು ಕ್ಷೇತ್ರಗಳಲ್ಲೂ ಕಾಂಗ್ರೆಸ್ ಗೆಲುವು ಸಾಧಿಸುವ ವಿಶ್ವಾಸ ವ್ಯಕ್ತಪಡಿಸಿದರು. ಇದೇ ವೇಳೆ ತಾವು ಪಕ್ಷದ ಕಾರ್ಯಕರ್ತರ ಸಮಸ್ಯೆಗಳಿಗೆ ಧ್ವನಿಯಾಗಿ ಕೆಲಸ ಮಾಡುವುದಾಗಿ ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ಭೂದೇಶ್, ಆರಿಫ್, ವೆಂಕಟೇಶ್‌ಗೌಡ, ರಘು ದಾಸರಕೊಪ್ಪಲು, ಅನಿಲ್ ಮೊದಲಾದವರಿದ್ದರು.

## ಹಾಸನಾಂಬದೇವಿ ನಾಗರಿಕರ ವೇದಿಕೆ ಅಸ್ತಿತ್ವಕ್ಕೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸಮಾಜದ ವಿವಿಧ ವರ್ಗಗಳ ಅಭಿವೃದ್ಧಿ ಹಾಗೂ ಬಡವರ ಕಲ್ಯಾಣಕ್ಕಾಗಿ 2026-27ನೇ ಸಾಲಿನಲ್ಲಿ ಹಲವು ಮಹತ್ವದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಅವುಗಳನ್ನು ಪರಿಣಾಮಕಾರಿ ಯಾಗಿ ಜಾರಿಗೆ ತರಲು ಕ್ರಮ ಕೈಗೊಳ್ಳಲಾಗುವುದು ಎಂದು ಶ್ರೀ ಹಾಸನಾಂಬದೇವಿ ನಾಗರಿಕರ ವೇದಿಕೆ ಅಧ್ಯಕ್ಷ ಲೋಕೇಶ್ ತಿಳಿಸಿದರು.

ಶ್ರೀ ಧರ್ಮಸ್ಥಳ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗ್ಗಡೆ ಅವರ ಆಶೀರ್ವಾದ ಹಾಗೂ ಶ್ರೀ ಸಂಗಮೇಶ್ವರ ಮಹಾಸ್ವಾಮೀಜಿ, ಜವೇನಹಳ್ಳಿ ಮಠ ಅವರ ಸಾನ್ನಿಧ್ಯದಲ್ಲಿ ವೇದಿಕೆಯು ಸಮಾಜಮುಖಿ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಬುಧವಾರ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.




ಅಧ್ಯಕ್ಷರಾದ ಲೋಕೇಶ್ ಬಿ.ಆರ್. ಅವರ ನೇತೃತ್ವದಲ್ಲಿ ಬಡ ಮಕ್ಕಳಿಗೆ ಉಚಿತ ಶಿಕ್ಷಣಕ್ಕೆ ಸಹಕಾರ ನೀಡುವುದು, ಪ್ರತಿ ತಿಂಗಳು ಒಂದು ದೇವಸ್ಥಾನ ಸ್ವಚ್ಛಗೊಳಿಸುವ ಕಾರ್ಯಕ್ರಮ ಹಮ್ಮಿಕೊಳ್ಳುವುದು, ಉಚಿತ ಹೊಲಿಗೆ ಮತ್ತು ಕಂಪ್ಯೂಟರ್ ತರಬೇತಿ ನೀಡುವುದು ಸೇರಿದಂತೆ ಹಲವು ಯೋಜನೆ ಜಾರಿಗೊಳಿಸಲು ತೀರ್ಮಾನಿಸಲಾಗಿದೆ ಎಂದರು.

ಇದಲ್ಲದೆ, ಎಲ್ಲಾ ವರ್ಗಗಳ ವಧು-ವರರಿಗೆ ಪ್ರತಿ ವರ್ಷ 108 ಉಚಿತ ಸಾಮೂಹಿಕ ವಿವಾಹ ಆಯೋಜಿಸುವುದು, ಗೃಹ ಕೈಗಾರಿಕಾ ಉತ್ಪನ್ನಗಳ ಪ್ಯಾಕಿಂಗ್ ಹಾಗೂ ಮಾರುಕಟ್ಟೆ ವ್ಯವಸ್ಥೆಗೆ ನೆರವು ನೀಡುವುದು, ರೈತಾಪಿ ಕುಟುಂಬಗಳಿಗೆ ಕೃಷಿ ಸಾಲ ಹಾಗೂ ಸ್ಥಳೀಯ ಬೀಜ ಪ್ರಭೇದ ಬಳಸಿ ಬೆಳೆ ಬೆಳೆಯಲು ಪ್ರೋತ್ಸಾಹ ನೀಡುವುದು ಸೇರಿದಂತೆ ವಿವಿಧ ಕಾರ್ಯಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಹಿಂದುಳಿದ ವರ್ಗಗಳು ಹಾಗೂ ಅಲ್ಪಸಂಖ್ಯಾತರ ಅಭಿವೃದ್ಧಿಗೆ ವಿಶೇಷ ಯೋಜನೆ ರೂಪಿಸಲಾಗಿದ್ದು, ಗ್ರಾಮೀಣ ಪ್ರದೇಶದ ಮಕ್ಕಳಲ್ಲಿ ಪರಿಸರ ಜಾಗೃತಿ ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ವೇದಿಕೆ ಪ್ರಧಾನ ಕಾರ್ಯದರ್ಶಿ ನೀತು ಕೊಥಾರಿ, ಗೌರವಾಧ್ಯಕ್ಷ ಮಂಜುನಾಥ್ ಬಿ.ಎನ್., ಸಹ ಕಾರ್ಯದರ್ಶಿ ವಿಜಯಕುಮಾರ್, ಕಾನೂನು ಸಲಹೆಗಾರ ಟಿ. ಗಣೇಶ್, ಸಂಚಾಲಕ ಶಿವಕುಮಾರ್, ಉಪಾಧ್ಯಕ್ಷೆ ಮಂಜುಳ, ಜಂಟಿ ಕಾನೂನು ಸಲಹೆಗಾರ್ತಿ ಸುಶೀಲಾದೇವಿ ಇದ್ದರು.

## ಪ್ರತ್ಯೇಕ ಪ್ರಕರಣದಲ್ಲಿ ಇಬ್ಬರು ನಾಪತ್ತೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

**ಹಾಸನ: ಪ್ರಕರಣ 1: ಆಲೂರು ಪೊಲೀಸ್ ಠಾಣಾ ವ್ಯಾಪ್ತಿ**

ಹಾಸನ ಜಿಲ್ಲೆಯ ಆಲೂರು ತಾಲ್ಲೂಕು, ಕಸಬಾ ಹೋಬಳಿಯ ನಿವಾಸಿಯಾದ ಜವರಮ್ಮ (82 ವರ್ಷ) ಎಂಬ ಹೆಂಗಸು ಕಾಣೆಯಾಗಿದ್ದಾರೆ. ಈ ಸಂಬಂಧ ಆಲೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಚಹರೆ ವಿವರ: ಸುಮಾರು 4.5 ಅಡಿ ಎತ್ತರ, ಸಾಧಾರಣ ಮೈಕಟ್ಟು ಹಾಗೂ ಕೋಲು ಮುಖ ಹೊಂದಿದ್ದಾರೆ. ಕನ್ನಡ ಭಾಷೆ ಮಾತನಾಡಬಲ್ಲ ಇವರು, ನಾಪತ್ತೆಯಾದ ಸಮಯದಲ್ಲಿ ಹಸಿರು ಬಣ್ಣದ ಸೀರೆಯನ್ನು ಧರಿಸಿದ್ದರು.

ಸಂಪರ್ಕಿಸಿ: ಈ ಚಹರೆಯುಳ್ಳ ಮಹಿಳೆಯ ಬಗ್ಗೆ ಯಾವುದೇ ಮಾಹಿತಿ ದೊರೆತಲ್ಲಿ ಸಾರ್ವಜನಿಕರು ಆಲೂರು ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ: 08170-2182312 ಅಥವಾ ಪೊಲೀಸ್ ಇನ್ಸ್‌ಪೆಕ್ಟರ್ ಮೊಬೈಲ್ ಸಂಖ್ಯೆ: 9480804739, 9480804752 ಕ್ಕೆ ಸಂಪರ್ಕಿಸಬೇಕಾಗಿ ಆಲೂರು ಪೊಲೀಸ್ ಠಾಣಾಧಿಕಾರಿಗಳು ತಿಳಿಸಿದ್ದಾರೆ.

**ಪ್ರಕರಣ 2: ಗೊರೂರು ಪೊಲೀಸ್ ಠಾಣಾ ವ್ಯಾಪ್ತಿ**

ಹಾಸನ ತಾಲ್ಲೂಕಿನ ಕಟ್ಟಾಯ ಹೋಬಳಿ, ಹಿರೇಗೌಡನಹಳ್ಳಿ ಗ್ರಾಮದ ನಿವಾಸಿಯಾದ ಸ್ವಾಮಿನಾಯಕ (66 ವರ್ಷ) ಎಂಬ ವ್ಯಕ್ತಿ ಕಾಣೆಯಾಗಿದ್ದಾರೆ. ಈ ಕುರಿತು ಗೊರೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಳ್ಳಲಾಗಿದೆ.

ಚಹರೆ ವಿವರ: ಸುಮಾರು 5.5 ಅಡಿ ಎತ್ತರ, ಗೋಧಿ ಮೈಬಣ್ಣ ಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಾರೆ. ನಾಪತ್ತೆಯಾಗುವಾಗ ಗುಲಾಬಿ ಬಣ್ಣದ (ಪಿಂಕ್) ಶರ್ಟ್ ಹಾಗೂ ಕಪ್ಪು ಪ್ಯಾಂಟ್ ಧರಿಸಿದ್ದರು. ಇವರ ಎಡಗೈ ಹೆಬ್ಬೆರಳು ಮತ್ತು ತೋರು ಬೆರಳಿನ ಮೇಲೆ ಬಿಳಿ ಮಚ್ಚೆಯ ಗುರುತಿರುತ್ತದೆ.

ಸಂಪರ್ಕಿಸಿ: ಈ ಚಹರೆಯುಳ್ಳ ವ್ಯಕ್ತಿಯು ಕಂಡುಬಂದಲ್ಲಿ ತಕ್ಷಣವೇ ಗೊರೂರು ಪೊಲೀಸ್ ಠಾಣೆಗೆ ಮಾಹಿತಿ ನೀಡುವಂತೆ ಕೋರಲಾಗಿದೆ.

## ಹೆಚ್.ಡಿ.ಸಿ.ಸಿ ಬ್ಯಾಂಕ್ ನೇಮಕಾತಿ ಹೆಸರಲ್ಲಿ ವಂಚನೆ

### ಯಾವುದೇ ಪ್ರಕ್ರಿಯೆ ನಡೆಯುತ್ತಿಲ್ಲ: ಆಂತರಿಕ ತನಿಖೆ-ಎಸ್ಪಿಗೆ ದೂರು: ಅಧ್ಯಕ್ಷರ ಹೇಳಿಕೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ (ಹೆಚ್‌ಡಿಸಿಸಿ)ನಲ್ಲಿ 2028-19 ರಿಂದ ಈಚೆಗೆ ಯಾವುದೇ ಹುದ್ದೆಗಳ ನೇಮಕಾತಿಗೆ ಅರ್ಜಿ ಆಹ್ವಾನಿಸಿಲ್ಲ. ಪರೀಕ್ಷೆಗಳನ್ನು ನಡೆಸುತ್ತಿಲ್ಲ. ಆದರೆ ಕೆಲ ಸಮಾಜಘಾತುಕ ಶಕ್ತಿಗಳು ಅಮಾಯಕರಿಗೆ ಉದ್ಯೋಗದ ಆಮಿಷ ಒಡ್ಡಿ ಹಣ ವಂಚನೆ ಮಾಡುತ್ತಿರುವ ದೂರು ಕೇಳಿ ಬಂದಿವೆ. ಈ ಸಂಬಂಧ ಆಂತರಿಕ ತನಿಖೆ ಜೊತೆಗೆ ಪೊಲೀಸರಿಗೂ ದೂರು ನೀಡುವುದಾಗಿ ಬ್ಯಾಂಕ್ ಅಧ್ಯಕ್ಷ ಸೋಮನಹಳ್ಳಿ ನಾಗರಾಜು ತಿಳಿಸಿದರು.

ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2018ರಲ್ಲಿ ವಿವಿಧ ದರ್ಜೆಯ ಒಟ್ಟು 83 ಹುದ್ದೆಗಳ ನೇಮಕಾತಿಗಾಗಿ ಅಧಿಸೂಚನೆ ಹೊರಡಿಸಲಾಗಿತ್ತು.

ಐಟಿ ಸೂಪರ್‌ವೈಸರ್ ಹುದ್ದೆಗೆ ಅರ್ಜಿ ಸಲ್ಲಿಸಿದ್ದ 516 ಅಭ್ಯರ್ಥಿಗಳಿಗೆ 2019, ಫೆ.10 ರಂದು, ಅಟೆಂಡರ್ ಹುದ್ದೆಯ ಅರ್ಹ 2,651




ಅಭ್ಯರ್ಥಿಗಳಿಗೆ 2019,

ಜೂ. 16 ರಂದು, ಕಿರಿಯ ಸಹಾಯಕ ಹುದ್ದೆಗೆ ಅರ್ಜಿ ಸಲ್ಲಿಸಿದ್ದ 3,541 ಅಭ್ಯರ್ಥಿಗಳಿಗೆ 2019, ಜೂ.30ರಂದು ಲಿಖಿತ ಪರೀಕ್ಷೆಗಳನ್ನು ನಡೆಸಲಾಗಿತ್ತು.

ಪರೀಕ್ಷೆ ಪೂರ್ಣಗೊಂಡು ಮುಂದಿನ ಹಂತದ ಪ್ರಕ್ರಿಯೆ ಆರಂಭಗೊಳ್ಳಬೇಕಿದ್ದಾಗ ನೇಮಕಾತಿ ಪ್ರಕ್ರಿಯೆಗೆ ಸರ್ಕಾರ ತಾತ್ಕಾಲಿಕ ತಡೆ ನೀಡಿತ್ತು. ಈ ಆದೇಶ ಪ್ರಶ್ನಿಸಿ ಬ್ಯಾಂಕ್‌ನ ಆಡಳಿತ ಮಂಡಳಿ ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದು, ಪ್ರಕರಣ ಪರಿಶೀಲನೆಯಲ್ಲಿದೆ ಎಂದರು.

ಅಲ್ಲಿಂದ ಇಲ್ಲಿಯವರೆಗೆ ಯಾವುದೇ ಅಧಿಸೂಚನೆ, ನೇಮಕಾರಿ ಪ್ರಕ್ರಿಯೆ ಬ್ಯಾಂಕ್‌ನಿಂದ ನಡೆದಿಲ್ಲ. ಆದರೆ ಕೆಲ ಸಮಾಜಘಾತುಕ ಪರಿಸ್ಥಿತಿ ದುರುಪಯೋಗಪಡಿಸಿಕೊಂಡು ಹೆಚ್‌ಡಿಸಿಸಿ ಬ್ಯಾಂಕ್‌ನಲ್ಲಿ ಉದ್ಯೋಗ ನೇಮಕಾತಿ ಮಾಡಿಕೊಳ್ಳಲಾಗುತ್ತಿದೆ. ನಿಮಗೆ ಕೆಲಸ ಕೊಡಿಸುವುದಾಗಿ ಹಣ ವಸೂಲಿ ಮಾಡಲಾಗುತ್ತಿದೆ ಎಂಬ ದೂರು ಕೇಳಿ ಬಂದಿವೆ. ಈ ರೀತಿಯ ಆಮಿಷಗಳಿಗೆ ಜನರು ಬಲಿಯಾಗಬಾರದು ಎಂದು ಮನವಿ ಮಾಡಿದರು.

ಕೆಲವರು ಬ್ಯಾಂಕಿನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸಹಿ ನಕಲಿ ರೂಪದಲ್ಲಿ ಸ್ಕ್ಯಾನ್ ಮಾಡಿ, ಬ್ಯಾಂಕಿನ ಲೆಟರ್‌ಹೆಡ್‌ನ್ನೂ ನಕಲು ಮಾಡಿ ಬಳಸಿರುವುದು ಪತ್ತೆಯಾಗಿದೆ. 2024ರ ದಿನಾಂಕ ನಮೂದಿಸಿ ಲಿಖಿತ ಪರೀಕ್ಷೆ ಪ್ರವೇಶ ಪತ್ರಗಳನ್ನೇ ಹೋಲುವ ನಕಲಿ ದಾಖಲೆ ಸೃಷ್ಟಿಸಿ ಅಭ್ಯರ್ಥಿಗಳಿಗೆ ಕಳುಹಿಸಿರುವ ಪ್ರಕರಣ

ಬೆಳಕಿಗೆ ಬಂದಿವೆ. ಈ ಸಂಬಂಧ ಆಂತರಿಕ ತನಿಖೆ ಜೊತೆಗೆ ಎಸ್ಪಿ ಅವರಿಗೂ ದೂರು ನೀಡಲಾಗುವುದು. ಇದರಲ್ಲಿ ಯಾರನ್ನೂ ರಕ್ಷಣೆ ಮಾಡುವ ಪ್ರಶ್ನೆ ಇಲ್ಲ ಎಂದು ಸ್ಪಷ್ಟಪಡಿಸಿದರು. 2020 ರಲ್ಲೂ ಹೀಗೆ ಆಗಿತ್ತು. ಆಗಲೂ ಎಸ್ಪಿ ಅವರಿಗೆ ದೂರು ನೀಡಿದ್ದೆವು ಎಂದರು.

ಸುಳ್ಳು ಹೇಳಿ ಉದ್ಯೋಗದ ಹೆಸರಿನಲ್ಲಿ ಹಣ ಪಾವತಿಸುವುದು, ಮಧ್ಯವರ್ತಿಗಳ ಮಾತು ನಂಬುವುದು ಅಥವಾ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುವ ದಾಖಲೆಗಳನ್ನು ನಂಬುವುದು ಅಪಾಯಕಾರಿ ಎಂದು ಎಚ್ಚರಿಸಿದರು. ಸರ್ಕಾರದ ನಿಯಮಾವಳಿ ಹಾಗೂ ನ್ಯಾಯಾಲಯದ ನಿರ್ದೇಶನಗಳಿಗೆ ಅನುಗುಣವಾಗಿಯೇ ಮುಂದಿನ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳ್ಳಲಿದೆ. ಭವಿಷ್ಯದಲ್ಲಿ ನೇಮಕಾತಿ ಪ್ರಕ್ರಿಯೆ ಆರಂಭವಾದರೆ, ಯಾವುದೇ ಮಹತ್ವದ ನಿರ್ಧಾರ ಕೈಗೊಂಡರೂ ಬ್ಯಾಂಕಿನ ಅಧಿಕೃತ ವೆಬ್‌ಸೈಟ್, ಪತ್ರಿಕಾ ಪ್ರಕಟಣೆ ಹಾಗೂ ದಿನಪತ್ರಿಕೆಗಳ ಮೂಲಕ ಮಾಹಿತಿ ನೀಡಲಾಗುವುದು ಎಂದು ತಿಳಿಸಿದರು.

ಉದ್ಯೋಗಾಕಾಂಕ್ಷಿಗಳು ಹಾಗೂ ಅವರ ಕುಟುಂಬದವರು ಯಾವುದೇ ಆಮಿಷಗಳಿಗೆ ಬಲಿಯಾಗದೆ, ಅನುಮಾನಾಸ್ಪದ ಕರೆಗಳು, ಸಂದೇಶಗಳು ಅಥವಾ ದಾಖಲೆಗಳ ಬಗ್ಗೆ ಎಚ್ಚರಿಕೆ ವಹಿಸಬೇಕು. ನೇಮಕಾತಿ ಸಂಬಂಧ ಯಾವುದೇ ಮಾಹಿತಿ ಬೇಕಿದ್ದಲ್ಲಿ ನೇರವಾಗಿ ಬ್ಯಾಂಕಿನ ಪ್ರಧಾನ ಕಚೇರಿ ಸಂಪರ್ಕಿಸಿ ಅಧಿಕೃತ ಮಾಹಿತಿ ಪಡೆಯುವಂತೆ ಕೋರಿದರು. ಪತ್ರಿಕಾಗೋಷ್ಠಿಯಲ್ಲಿ ಬ್ಯಾಂಕ್ ಉಪಾಧ್ಯಕ್ಷ ರಾಂಪುರ ಶೇಖರ್, ನಿರ್ದೇಶಕರಾದ ಹೊನ್ನವಳ್ಳಿ ಸತೀಶ್, ಕಣದಹಳ್ಳಿ ಮಂಜೇಗೌಡ,

ಕಬ್ಬಿನಹಳ್ಳಿ ಜಗದೀಶ್, ಗಿರೀಶ್ ಚನ್ನವೀರಪ್ಪ, ಬಿದರಿಕೆರೆ ಜಯರಾಮ್, ಎಂ.ಎ.ನಾಗರಾಜ್ ಮೊದಲಾದವರಿದ್ದರು.

## ಹಾಸನ ಜಿಲ್ಲಾ ಕೇಂದ್ರ ಕನ್ನಡ ಸಾಹಿತ್ಯ ವೇದಿಕೆಯಿಂದ ಮುಂಗಾರು ಕವಿಗೋಷ್ಠಿ

# ಕಾವ್ಯ ಸಮಾಜದ ಕಟ್ಟಕಡೆಯ ವ್ಯಕ್ತಿಯ ಧ್ವನಿಯೂ ಆಗಬೇಕು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ಕಾವ್ಯವೆಂದರೆ ಎಲ್ಲೋ ಕೂತು ಇನ್ನೆಲ್ಲಿಯೋ ಪ್ರಸಂಗ ಸೃಜಿಸುವುದಲ್ಲ, ಸಮಾಜದ ಅನುಭಾವಿಕ ನೆಲೆಗಟ್ಟಿನಲ್ಲಿರಬೇಕು. ಕಾವ್ಯ ಸಮಾಜದ ಕಟ್ಟಕಡೆಯ ವ್ಯಕ್ತಿಯ ಧ್ವನಿಯೂ ಆಗಬೇಕು ಎಂದು ಕೇಂದ್ರ ಕನ್ನಡ ಸಾಹಿತ್ಯ ವೇದಿಕೆಯ ಸಂಸ್ಥಾಪಕ ಅಧ್ಯಕ್ಷ ಕೊಟ್ರೇಶ್ ಎಸ್. ಉಪ್ಪಾರ್ ಅಭಿಪ್ರಾಯಪಟ್ಟರು.

ಅವರು ಹಾಸನ ಜಿಲ್ಲಾ ಘಟಕದ ವತಿಯಿಂದ ನಗರದಲ್ಲಿ ಹಮ್ಮಿಕೊಂಡಿದ್ದ ಮುಂಗಾರು ಕವಿಗೋಷ್ಠಿಯ ಅಧ್ಯಕ್ಷತೆ ವಹಿಸಿ ಮಾತನಾಡಿ ಕೇಂದ್ರ ಕನ್ನಡ ಸಾಹಿತ್ಯ ವೇದಿಕೆ ಕಳೆದ ಏಳೆಂಟು ವರ್ಷಗಳಿಂದಲೂ ರಾಜ್ಯ ಹಾಗೂ ನೆರೆರಾಜ್ಯಗಳಲ್ಲಿ ಕನ್ನಡದ ವಿವಿಧ ಆಯಾಮಗಳನ್ನು ಪರಿಚಯಿಸುತ್ತಾ




ಸೃಜನಾತ್ಮಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಾ ಬಂದಿದೆ. ಹಾಸನ ವೇದಿಕೆಯ ಜನ್ಮಭೂಮಿ. ಎಲೆಮರೆ ಸಾಧಕರನ್ನು ಗುರುತಿಸಿ ಮುನ್ನೆಲೆಗೆ ತರುವ ಹಾಗೂ ಯುವ ಪ್ರತಿಭೆಗಳನ್ನು ಸಾಹಿತ್ಯ ಕ್ಷೇತ್ರದತ್ತ ಸೆಳೆಯಲು ಅನೇಕ ಗುಣಾತ್ಮಕ ಕಾರ್ಯಕ್ರಮಗಳನ್ನು ವಾಸು ಸಮುದ್ರವಳ್ಳಿ ಹಾಸನ ಜಿಲ್ಲಾಧ್ಯಕ್ಷರಾಗಿದ್ದ ಮೊದಲ ಅವಧಿಯಲ್ಲಿ ಮಾಡಲಾಗಿತ್ತು. ಇನ್ನೂ ಉನ್ನತ ಮಟ್ಟಕ್ಕೆ ವೇದಿಕೆ ಬೆಳೆಸುವ ನಿಟ್ಟಿನಲ್ಲಿ ವಾಸು ಅವರನ್ನು ಎರಡನೇ ಬಾರಿಗೆ




ಜಿಲ್ಲಾಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಗಿದೆ. ನೂರಾರು ಕವಿಗೋಷ್ಠಿಗಳನ್ನು ಹಮ್ಮಿಕೊಂಡು ಹಲವಾರು ಹೊಸ ಪ್ರತಿಭೆಗಳನ್ನು ಕನ್ನಡ ಸಾರಸ್ವತ ಲೋಕಕ್ಕೆ ಪರಿಚಯಿಸಿದ ಕೀರ್ತಿ ವೇದಿಕೆಗೆ ಸಲ್ಲುತ್ತದೆ. ಕವಿಗಳಿಗೆ ಅಧ್ಯಯನ ಮತ್ತು ಅಧ್ಯಾಪನಗಳು ಬಹಳ ಮುಖ್ಯ. ಒಬ್ಬ ಕವಿಗೆ ನಮ್ಮ ಕಾವ್ಯ ಪರಂಪರೆಯ ಜೊತೆಗೆ ವರ್ತಮಾನದ ತಲ್ಲಣಗಳ ಅರಿವಿರಬೇಕು. ಅಂದಾಗ ಮಾತ್ರ ಕಾವ್ಯ ಸಮಾಜದ ಧ್ವನಿಯಾಗುತ್ತದೆ ಎಂದರು.

### ಮುಂಗಾರು ಕಾವ್ಯ ಕಲರವದ ಮಿಡಿತಗಳು

ಕವಿ ಧರ್ಮ ಕೆರಲೂರು ಓದಿದ 'ಅನುಮತಿ' ಕವಿತೆ ಮೇಲ್ನೋಟಕ್ಕೆ ಪ್ರೇಮ ನಿವೇದನೆಯಂತೆ ಕಂಡರೂ ಇಳೆ ಮತ್ತು ಮಳೆ ನಡುವಿನ ಪ್ರೇಮ ಪ್ರಸಂಗವನ್ನು ಕಟ್ಟಿಕೊಡುವಂತಿತ್ತು. ರುಮಾನ ಜಬೀರ್ ಅವರ 'ಪ್ರಕೃತಿಯ ಮೌನ' ಕಾಲಗಳ ಓಟದ ಜೊತೆಗೆ ನಿತ್ಯ ಜೀವನದ ಹೋರಾಟದ ಬದುಕನ್ನು ಅನಾವರಣ ಮಾಡಿತು. ನೀಲಾವತಿ ಸಿ.ಎನ್. ಅವರ 'ಮಳೆಗೊಂದು ಮನವಿ' ಕವಿತೆ ಮಾನವನ ಸ್ವಯಂಕೃತ ಅಪರಾಧದಿಂದ ಭೂತಾಪಮಾನ ಏರಿಕೆಯ ತಲ್ಲಣ ಹಾಗೂ ಇಳೆಗೆ ಮಳೆಯ ಅನಿವಾರ್ಯತೆಯನ್ನು ಪ್ರತಿಬಿಂಬಿಸಿತು. ಚಂದ್ರಕಲಾ ಎಂ. ಆಲೂರು ಅವರ 'ಒಲವ ಮುಂಗಾರು ಮಳೆ' ಕವಿತೆಯಲ್ಲಿ ಪ್ರಕೃತಿಯೇ ಪ್ರೇಯಸಿಯಾಗಿ ಒಡಮೂಡಿ ಬದುಕಿನ ಸಾಗುವಿಕೆಯನ್ನು ಅನಾವರಣಗೊಳಿಸಿತು. ಎಚ್.ಬಿ. ಚೂಡಾಮಣಿಯವರ 'ನಿನ್ನ ಕಣ್ಗಳ ಮಿಂಚಿಂದ' ಕವಿತೆ ಪ್ರೇಮ ನಿವೇದನೆ ಮಾಡಿದರೆ, ರಾಣಿ ಸಿ.ಚರಾಶ್ರೀಯವರ 'ಯುಗದ ಹಾದಿ' ಕವಿತೆ ವಸಂತ ಋತುವಿನ ಮಹತ್ವವನ್ನು ಸಾರಿತು. ಗಿರಿಜಾ ನಿರ್ವಾಣಿಯವರ 'ಹಸಿರು ಗಿಡದ ಮೊಸರು ಮಲ್ಲಿಗೆ' ಕವಿತೆ ಪ್ರಕೃತಿ ಸೌಂದರ್ಯದ ಜೊತೆಗೆ ಇಹ ಲೋಕದ ಜೀವಿಗಳ ಸಾಂಗತ್ಯಕ್ಕೆ ಕನ್ನಡಿ ಹಿಡಿಯಿತು. ಲಲಿತ ಎಸ್. ಸಕಲೇಶಪುರ ಅವರ 'ಯೋಗ' ಕವಿತೆ ಜೇಷ್ಠ ಮಾಸದ ಮಹತ್ವ, ಮಳೆಯ ರೌದ್ರಾವತಾರದ ಮುಂಗಾರಿನ ಗುಡುಗು, ಸಿಡಿಲುಗಳ ನರ್ತನ ಹಾಗೂ ಇಳೆಯ ಅನುಬಂಧವನ್ನು ಸಾರಿತು. ಪದ್ಮಾವತಿ ವೆಂಕಟೇಶ್ ಅವರ 'ಮುಂಗಾರು ಮಳೆ' ಹಾಗೂ ಗೊರೂರು ಅನಂತರಾಜುರವರ 'ಮುಂಗಾರು ಹನಿಗಳು' ಸಾಮಾಜಿಕ ವಿಡಂಬನೆ ಮಾಡಿದವು.

ರಾಜ್ಯ ಜಂಟಿ ಕಾರ್ಯದರ್ಶಿ ನಾಗರಾಜ್ ದೊಡ್ಡಮನಿ ಮಾತನಾಡಿ ಕೇಂದ್ರ ಕನ್ನಡ ಸಾಹಿತ್ಯ ವೇದಿಕೆ 2018 ರಲ್ಲಿ ಸಮಾನ ಮನಸ್ಸುಳ್ಳ ಆರು ಜನ ಬರಹಗಾರರಿಂದ ಯುವ ಜನರಲ್ಲಿ ಸಾಹಿತ್ಯಿಕ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಹಾಗೂ ಸಾಹಿತ್ಯಿಕ ಪ್ರತಿಭೆಗಳನ್ನು ಪ್ರೋತ್ಸಾಹಿಸಿ ಮುಖ್ಯ ವಾಹಿನಿಗೆ ತರುವ ಮುಖ್ಯ ಧ್ಯೇಯವನ್ನಾಗಿಸಿಕೊಂಡು ಜನ್ಮ ತಾಳಿತು. ಸಂಸ್ಥಾಪಕ ಅಧ್ಯಕ್ಷರಾಗಿ ಕೊಟ್ರೇಶ್ ಎಸ್. ಉಪ್ಪಾರ್, ಕಾರ್ಯದರ್ಶಿಯಾಗಿ ಡಾ. ಪಿ. ದಿವಾಕರ ನಾರಾಯಣ, ಕೋಶಾಧ್ಯಕ್ಷರಾಗಿ ಎಚ್.ಎಸ್.ಬಸವರಾಜ್, ಜಂಟಿ ಕಾರ್ಯದರ್ಶಿಯಾಗಿ ನಾಗರಾಜ್ ದೊಡ್ಡಮನಿ, ಸಂಘಟನಾ ಕಾರ್ಯದರ್ಶಿಯಾಗಿ ವಾಸು ಸಮುದ್ರವಳ್ಳಿ, ಸಹ ಕಾರ್ಯದರ್ಶಿಯಾಗಿ ದೇಸು ಆಲೂರು ಇವರುಗಳು ಸಂಸ್ಥಾಪಕ ಟ್ರಸ್ಟಿಗಳಾಗಿ ಆಯ್ಕೆಯಾಗಿ ಕಾರ್ಯೋನ್ಮುಖರಾದೆವು. ಹಾಸನದಲ್ಲಿ ಪ್ರಾರಂಭವಾದ ಈ ನೊಂದಾಯಿತ ಸಂಘಟನೆ ಕ್ರಮೇಣ ರಾಜ್ಯದ ಬಹುತೇಕ ಜಿಲ್ಲೆಗಳು ಸೇರಿದಂತೆ ಆಂದ್ರಪ್ರದೇಶ, ಕೇರಳ, ಮಹಾರಾಷ್ಟ್ರ, ಸೌದಿ ಅರೇಬಿಯಾ, ಅಮೆರಿಕ ಸೇರಿದಂತೆ ರಾಜ್ಯ, ಹೊರರಾಜ್ಯ, ಅಂತರಾಷ್ಟ್ರೀಯ ಮಟ್ಟದಲ್ಲಿ ತನ್ನ ಸಾಂಸ್ಥಿಕ ಪ್ರಾತಿನಿಧ್ಯತೆಯನ್ನು ವಿಸ್ತರಿಸಿಕೊಂಡಿದೆ ಎಂದರು.

ವೇದಿಕೆಯಲ್ಲಿ ರಾಜ್ಯ ಸಂಘಟನಾ ಕಾರ್ಯದರ್ಶಿ ಹಾಗೂ ಹಾಸನ ಜಿಲ್ಲಾಧ್ಯಕ್ಷ ವಾಸು ಸಮುದ್ರವಳ್ಳಿ, ಹಾಸನ ತಾಲ್ಲೂಕು ಅಧ್ಯಕ್ಷೆ ಕೆ.ಸಿ.ಗೀತಾ, ಬೇಲೂರು ತಾಲ್ಲೂಕು ಅಧ್ಯಕ್ಷ ಮಾರುತಿ ಕೆ.ಬಿ. ದೊಡ್ಡಕೋಡಿಹಳ್ಳಿ, ಹೊಳೆನರಸೀಪುರ ತಾಲ್ಲೂಕು ಅಧ್ಯಕ್ಷೆ ಕಾವ್ಯಶ್ರೀ ಎಚ್.ಕೃಷ್ಣ ಮುಂತಾದವರು ಮಾತನಾಡಿದರು. ಈ ಸಂದರ್ಭದಲ್ಲಿ ಕವಿಗಳಾದ ಗೊರೂರು ಅನಂತರಾಜು, ಲಲಿತ ಎಸ್. ಸಕಲೇಶಪುರ, ಗಿರಿಜಾ ನಿರ್ವಾಣಿ, ಧರ್ಮ ಕೆರಲೂರು, ರುಮಾನ ಜಬೀರ್, ಸಿ.ಎನ್. ನೀಲಾವತಿ, ಚಂದ್ರಕಲಾ ಎಂ. ಆಲೂರು, ಎಚ್.ಬಿ.ಚೂಡಾಮಣಿ, ರಾಣಿ ಸಿ. ಚರಾಶ್ರೀ, ಪದ್ಮಾವತಿ ವೆಂಕಟೇಶ್ ಸೇರಿದಂತೆ ಹಲವರು ಕಾವ್ಯ ವಾಚನ ಮಾಡಿದರು.

## ಚಿಕ್ಕಬಳ್ಳಾಪುರಕ್ಕೆ ಹೊರಟ ರೈತರು



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ರಾಜ್ಯದಲ್ಲಿ ರೈತರ ಭೂಮಿ, ಬದುಕು ಮತ್ತು ಕೃಷಿ ಹಕ್ಕುಗಳ ರಕ್ಷಣೆಗೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಮತ್ತೊಮ್ಮೆ ಹೋರಾಟದ ಕಹಳೆ ಮೊಳಗಿಸಿದ್ದು,

ಜೂನ್ 5 ರಂದು ಚಿಕ್ಕಬಳ್ಳಾಪುರದಲ್ಲಿ ಬೃಹತ್ ಬೈಕ್ ರ್ಯಾಲಿ ಹಾಗೂ ವಿಧಾನಸೌಧ ಮುತ್ತಿಗೆ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಹೋರಾಟದಲ್ಲಿ ಭಾಗಿಯಾಗಲು ಜಿಲ್ಲೆಯ ವಿವಿಧ ಭಾಗಗಳಿಂದ ನೂರಾರು ಜನ ರೈತರು ರೈಲಿನ ಮೂಲಕ ಬುಧವಾರ ಪ್ರಯಾಣ ಬೆಳೆಸಿದರು.

ಇದೇ ವೇಳೆ ಮಾತನಾಡಿದ ರೈತ ಸಂಘದ ಜಿಲ್ಲಾಧ್ಯಕ್ಷ ಬಾಬು, 81 ದಿನಗಳಿಂದ ನಡೆಯುತ್ತಿರುವ ನಿರಂತರ ಧರಣಿ ಹೋರಾಟದ ಮುಂದುವರಿದ ಭಾಗವಾಗಿ ಈ ಪ್ರತಿಭಟನೆ ರೂಪುಗೊಂಡಿದ್ದು, ಶುಕ್ರವಾರ ರಾಜ್ಯಾಧ್ಯಕ್ಷ ಕೋಡಿಹಳ್ಳಿ ಚಂದ್ರಶೇಖರ್ ಅವರ ನೇತೃತ್ವದಲ್ಲಿ ವಿಧಾನಸೌಧ ಮುತ್ತಿಗೆ ಕಾರ್ಯಕ್ರಮ ನಡೆಯಲಿದೆ.

ಅದರಲ್ಲಿ ಭಾಗಿಯಾಗಲು ನಾವೆಲ್ಲರೂ ಹೊರಟಿದ್ದೇವೆ. ರಾಜ್ಯ ಸರ್ಕಾರ ಕೈಗಾರಿಕಾ ಅಭಿವೃದ್ಧಿ ಹೆಸರಿನಲ್ಲಿ ಫಲವತ್ತಾದ ಕೃಷಿ ಭೂಮಿ ಸ್ವಾಧೀನಪಡಿಸಿಕೊಳ್ಳುತ್ತಿರುವುದು ರೈತ

ಸಮುದಾಯವನ್ನು ಸಂಕಷ್ಟಕ್ಕೆ ತಳ್ಳುತ್ತಿದೆ ಎಂದು ಆರೋಪಿಸಿದರು.

ಕಳೆದ ಎರಡು ದಶಕಗಳಲ್ಲಿ ಕೈಗಾರಿಕೆಗಳಿಗಾಗಿ ಲಕ್ಷಾಂತರ ಎಕರೆ ಭೂಮಿ ಸ್ವಾಧೀನಪಡಿಸಿಕೊಂಡಿದ್ದರೂ, ಅದರಲ್ಲಿ ಬಹುಪಾಲು ಭೂಮಿ ಕೈಗಾರಿಕಾ ಉದ್ದೇಶಕ್ಕೆ ಬಳಕೆಯಾಗದೆ ಖಾಲಿ

ಬಿದ್ದಿದೆ. ಇದು ರೈತರ ಬದುಕಿನ ಮೇಲೆ ಗಂಭೀರ ಪರಿಣಾಮ ಬೀರಿದೆ. ಕೃಷಿ ಆಧಾರಿತ ಗ್ರಾಮೀಣ ಆರ್ಥಿಕ ವ್ಯವಸ್ಥೆಯನ್ನು ಕುಸಿಯುವಂತೆ ಮಾಡುತ್ತಿದೆ ಎಂದು ದೂರಿದರು. ಮುಂದುವರಿದು ಚಿಕ್ಕಬಳ್ಳಾಪುರ ಜಿಲ್ಲೆ ಶಿಡ್ಲಘಟ್ಟ ತಾಲೂಕಿನ ಜಂಗಮಕೋಟೆ ಹೋಬಳಿಯ 13 ಗ್ರಾಮಗಳ ಸುಮಾರು 2,823 ಎಕರೆ ಫಲವತ್ತಾದ ಕೃಷಿ ಭೂಮಿಯನ್ನು ಭೂಸ್ವಾಧೀನಪಡಿಸಿಕೊಳ್ಳುವ ಪ್ರಕ್ರಿಯೆ ರೈತರ ಆತಂಕ ತರಿಸಿದೆ ಎಂದರು. ಇದನ್ನು ಖಂಡಿಸಿ ಇತ್ತೀಚೆಗೆ ಪ್ರತಿಭಟನೆ ನಡೆಸಿದ ವೇಳೆ ಸರ್ಕಾರ ಹೋರಾಟಗಾರರ ಮೇಲೆ ಬಲಪ್ರಯೋಗ ನಡೆಸಿರುವುದನ್ನು ಖಂಡಿಸಿದರು. ಇದು ಶಿಡ್ಲಘಟ್ಟಕ್ಕೆ ಮಾತ್ರ ಸೀಮಿತ ಅಲ್ಲ, ರಾಜ್ಯದ ಸಾವಿರಾರು ಗ್ರಾಮಗಳಲ್ಲಿ ಇಂಥ ಪ್ರಕ್ರಿಯೆ ನಡೆದಿದೆ. ಇದು ನಿಲ್ಲಬೇಕು. ರೈತರ ಹಿತಾಸಕ್ತಿಗೆ ಧಕ್ಕೆ ತರುವ ತಿದ್ದುಪಡಿಗಳನ್ನು ಸರ್ಕಾರ ಹಿಂಪಡೆಯಬೇಕು ಎಂದರು.

# ಜೂನ್ 5ರಂದು ರೈತರಿಂದ ವಿಧಾನಸೌಧ ಮುತ್ತಿಗೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ರಾಜ್ಯದಲ್ಲಿ ರೈತರ ಭೂಮಿ, ಬದುಕು ಮತ್ತು ಕೃಷಿ ಹಕ್ಕುಗಳ ರಕ್ಷಣೆಗೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಮತ್ತೊಮ್ಮೆ ಹೋರಾಟದ ಕಹಳೆ ಮೊಳಗಿಸಿದ್ದು, ಜೂನ್ 5ರಂದು ಚಿಕ್ಕಬಳ್ಳಾಪುರದಲ್ಲಿ ಬೃಹತ್ ಬೈಕ್ ರ್ಯಾಲಿ ಹಾಗೂ ವಿಧಾನಸೌಧ ಮುತ್ತಿಗೆ ಹಮ್ಮಿಕೊಂಡಿದ್ದು, ಈ ನಿಟ್ಟಿನಲ್ಲಿ ಹಾಸನ ಜಿಲ್ಲೆಯ ವಿವಿಧ ಭಾಗಗಳಿಂದ ಬುಧವಾರದಂದು ನೂರಾರು ಜನ ರೈತರು ರೈಲಿನ ಮೂಲಕ ಪ್ರಯಾಣ ಬೆಳೆಸಿದರು.

ಇದೆ ವೇಳೆ ರೈತ ಸಂಘದ ಜಿಲ್ಲಾಧ್ಯಕ್ಷ ಬಾಬು ಮಾತನಾಡಿ, 81 ದಿನಗಳಿಂದ ನಡೆಯುತ್ತಿರುವ ನಿರಂತರ ಧರಣಿ ಹೋರಾಟದ ಮುಂದುವರಿದ ಭಾಗವಾಗಿ ಈ ಪ್ರತಿಭಟನೆ ರೂಪುಗೊಂಡಿದ್ದು, ಜೂನ್ 5ರ ಶುಕ್ರವಾರದಂದು ರಾಜ್ಯಾಧ್ಯಕ್ಷ ಕೋಡಿಹಳ್ಳಿ ಚಂದ್ರಶೇಖರ್ ನೇತೃತ್ವದಲ್ಲಿ



ವಿಧಾನಸೌಧ ಮುತ್ತಿಗೆ ಕಾರ್ಯಕ್ರಮ ನಡೆಯಲಿದೆ. ಹಾಸನ ಜಿಲ್ಲೆಯಿಂದ ರೈತರು ಹಾಸನ ರೈಲ್ವೆ ನಿಲ್ದಾಣದಿಂದ ಚಿಕ್ಕಬಳ್ಳಾಪುರದತ್ತ ಪ್ರಯಾಣ ಬೆಳೆಸಿದ್ದಾರೆ ಎಂದರು. ರಾಜ್ಯ ಸರ್ಕಾರ ಕೈಗಾರಿಕಾ ಅಭಿವೃದ್ಧಿಯ ಹೆಸರಿನಲ್ಲಿ ಫಲವತ್ತಾದ ಕೃಷಿ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳುತ್ತಿರುವ ಕ್ರಮ ರೈತ ಸಮುದಾಯವನ್ನು ಸಂಕಷ್ಟಕ್ಕೆ ತಳ್ಳುತ್ತಿದೆ ಎಂದು ಆರೋಪಿಸಿದರು. ಕಳೆದ ಎರಡು ದಶಕಗಳಲ್ಲಿ ಕೈಗಾರಿಕೆಗಳಿಗಾಗಿ ಲಕ್ಷಾಂತರ ಎಕರೆ ಭೂಮಿ ಸ್ವಾಧೀನಪಡಿಸಿಕೊಂಡಿದ್ದರೂ, ಅದರಲ್ಲಿ ಬಹುಪಾಲು ಭೂಮಿ ಕೈಗಾರಿಕಾ ಉದ್ದೇಶಕ್ಕೆ ಬಳಕೆಯಾಗದೆ ಖಾಲಿಯೇ ಉಳಿದಿದೆ. ಈ ಪ್ರಕ್ರಿಯೆ ರೈತರ ಬದುಕಿನ ಮೇಲೆ ಗಂಭೀರ ಪರಿಣಾಮ ಬೀರಿದ್ದು, ಕೃಷಿ ಆಧಾರಿತ ಗ್ರಾಮೀಣ ಆರ್ಥಿಕ ವ್ಯವಸ್ಥೆಯನ್ನು ಕುಸಿಯುವಂತೆ ಮಾಡುತ್ತಿದೆ ಎಂದು ದೂರಿದರು. ಚಿಕ್ಕಬಳ್ಳಾಪುರ ಜಿಲ್ಲೆಯ ಶಿಡ್ಲಘಟ್ಟ ತಾಲೂಕಿನ ಜಂಗಮಕೋಟೆ ಹೋಬಳಿಯ 13 ಗ್ರಾಮಗಳ ಸುಮಾರು 2,823 ಎಕರೆ ಫಲವತ್ತಾದ ಕೃಷಿ ಭೂಮಿಯನ್ನು ಭೂಸ್ವಾಧೀನಪಡಿಸಿಕೊಳ್ಳುವ ಪ್ರಕ್ರಿಯೆ ರೈತರ ಆತಂಕಕ್ಕೆ ಕಾರಣವಾಗಿದೆ. ಈ ಪ್ರದೇಶದಲ್ಲಿ ಹೂವು, ಹಣ್ಣು, ತರಕಾರಿ, ಸೊಪ್ಪು, ಮಾವು, ಗೋಡಂಬಿ, ಶುಂಠಿ, ತೆಂಗು, ಅಡಿಕೆ ಹಾಗೂ ರೇಷ್ಮೆ ಬೆಳೆಗಳನ್ನು ಬೆಳೆಯಲಾಗುತ್ತಿದ್ದು, ಸಾವಿರಾರು ಕುಟುಂಬಗಳು ಕೃಷಿಯನ್ನೇ ನಂಬಿಕೊಂಡು ಬದುಕು ಸಾಗಿಸುತ್ತಿವೆ. ಇಂತಹ ಭೂಮಿಯನ್ನು ಕೈಗಾರಿಕೆಗಳಿಗೆ ನೀಡುವುದು ಕೃಷಿ ಮತ್ತು ಆಹಾರ ಭದ್ರತೆಗೆ ದೊಡ್ಡ ಹೊಡೆತವಾಗಲಿದೆ ಎಂದರು. ಈ ವಿಚಾರವಾಗಿ ಸ್ಥಳೀಯ ರೈತರು ಹಲವು ವರ್ಷಗಳಿಂದ ಹೋರಾಟ ನಡೆಸುತ್ತಿದ್ದು, ಇತ್ತೀಚೆಗೆ ನಡೆದ ಪ್ರತಿಭಟನೆ ವೇಳೆ ಸರ್ಕಾರ ರೈತರ ಮೇಲೆ ಬಲಪ್ರಯೋಗ ನಡೆಸಿರುವುದನ್ನು ಖಂಡಿಸಿದರು. ರೈತರ ಸಮಸ್ಯೆ ಕೇವಲ ಒಂದು ಜಿಲ್ಲೆ ಅಥವಾ 13 ಗ್ರಾಮಗಳಿಗೆ ಸೀಮಿತವಾಗಿಲ್ಲ. ರಾಜ್ಯದ ಸಾವಿರಾರು ಗ್ರಾಮಗಳಲ್ಲಿ ಇದೇ ರೀತಿಯ ಭೂಸ್ವಾಧೀನ, ನೀರಿನ ಕೊರತೆ, ವಿದ್ಯುತ್ ಸಮಸ್ಯೆ ಹಾಗೂ ಕೃಷಿ ವೆಚ್ಚದ ಏರಿಕೆಗಳಿಂದ ರೈತರು ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ತಿಳಿಸಿದರು.

# ಬೃಹತ್ ಪರದೆಯಲ್ಲಿ ಡಿ.ಕೆ.ಶಿ ಪ್ರಮಾಣವಚನ ವೀಕ್ಷಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಡಿ.ಕೆ. ಶಿವಕುಮಾರ್ ಅವರು ಪ್ರಮಾಣವಚನ ಸ್ವೀಕರಿಸಿದ ಐತಿಹಾಸಿಕ ಕ್ಷಣವನ್ನು ಹಾಸನದಲ್ಲೂ ಕಾಂಗ್ರೆಸ್ ಕಾರ್ಯಕರ್ತರು ಸಂಭ್ರಮದಿಂದ ಆಚರಿಸಿದರು. ಕಾಂಗ್ರೆಸ್ ಪಕ್ಷದ ವತಿಯಿಂದ ನಗರದ ಹೇಮಾವತಿ ಪ್ರತಿಮೆ ಮುಂಭಾಗ ಬೃಹತ್ ಎಲ್‌ಇಡಿ ಪರದೆ ಹಾಗೂ ಪ್ರೊಜೆಕ್ಟರ್ ವ್ಯವಸ್ಥೆ ಮಾಡಲಾಗಿದ್ದು, ನೂರಾರು ಕಾರ್ಯಕರ್ತರು, ಮಹಿಳಾ ಕಾಂಗ್ರೆಸ್ ಪದಾಧಿಕಾರಿಗಳು ಹಾಗೂ ಅಭಿಮಾನಿಗಳು ಒಟ್ಟಾಗಿ ಕಾರ್ಯಕ್ರಮವನ್ನು ವೀಕ್ಷಿಸಿದರು.

ಪ್ರಮಾಣವಚನ ಸ್ವೀಕಾರದ ನೇರ ಪ್ರಸಾರ ಆರಂಭವಾಗುತ್ತಿದ್ದಂತೆ ಕಾರ್ಯಕರ್ತರು ಘೋಷಣೆಗಳನ್ನು ಕೂಗಿ ಪಟಾಕಿ ಸಿಡಿಸಿ ಸಂಭ್ರಮ ವ್ಯಕ್ತಪಡಿಸಿದರು. ಸಿಹಿ ಹಂಚಿ, ಪರಸ್ಪರ ಅಭಿನಂದನೆ ಸಲ್ಲಿಸಿ ಹಬ್ಬದ ವಾತಾವರಣ ನಿರ್ಮಿಸಿದರು. ನಗರದ



ಪ್ರಮುಖ ರಸ್ತೆ, ವೃತ್ತಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಡಿ.ಕೆ. ಶಿವಕುಮಾರ್ ಅವರ ಬೃಹತ್ ಕಟೌಟ್‌ಗಳು, ಬ್ಯಾನರ್‌ಗಳು ಮತ್ತು ಸ್ವಾಗತ ಫಲಕಗಳು ರಾರಾಜಿಸುತ್ತಿದ್ದು, ನಗರದೆಲ್ಲೆಡೆ ಕಾಂಗ್ರೆಸ್ ಕಾರ್ಯಕರ್ತರ ಉತ್ಸಾಹ ಎದ್ದು ಕಾಣುತ್ತಿತ್ತು.

ಈ ಸಂದರ್ಭದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಜಿಲ್ಲಾ ಕಾಂಗ್ರೆಸ್ ಮುಖಂಡ ಬನವಾಸೆ ರಂಗಸ್ವಾಮಿ, ಕರ್ನಾಟಕ ಕಂಡ ಅಪರೂಪದ ಹೋರಾಟಗಾರ ಹಾಗೂ ಕಾಂಗ್ರೆಸ್ ಪಕ್ಷದ ನಿಷ್ಠಾವಂತ ನಾಯಕ ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿ ಹುದ್ದೆ ಅಲಂಕರಿಸಿರುವುದು ರಾಜ್ಯದ ಜನತೆ ಹಾಗೂ ಕಾರ್ಯಕರ್ತರಿಗೆ ಸಂತಸದ ಕ್ಷಣವಾಗಿದೆ. ಅವರ ನಾಯಕತ್ವದಲ್ಲಿ ರಾಜ್ಯ ಮತ್ತಷ್ಟು ಅಭಿವೃದ್ಧಿಯತ್ತ ಸಾಗಲಿದೆ ಎಂಬ ವಿಶ್ವಾಸವಿದೆ ಎಂದರು. ಮುಂದಿನ ದಿನಗಳಲ್ಲಿ ಹಾಸನ ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷ ಮತ್ತಷ್ಟು ಬಲಿಷ್ಠವಾಗಲಿದ್ದು, ಸಂಘಟನೆಗೆ ಹೊಸ ಚೈತನ್ಯ ದೊರೆಯಲಿದೆ. 2028ರ ವಿಧಾನಸಭಾ ಚುನಾವಣೆಯಲ್ಲಿ ಜಿಲ್ಲೆಯ ಏಳು ಕ್ಷೇತ್ರಗಳಲ್ಲೂ ಕಾಂಗ್ರೆಸ್ ಜಯಗಳಿಸಿ ಹೊಸ ರಾಜಕೀಯ ಇತಿಹಾಸ ನಿರ್ಮಿಸಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು. ಹಾಸನ ಜಿಲ್ಲೆಯ ಅಭಿವೃದ್ಧಿಗೆ ಸಂಬಂಧಿಸಿದಂತೆ ತಮ್ಮ ಹಲವು ವರ್ಷಗಳ ಕನಸನ್ನು ಪ್ರಸ್ತಾಪಿಸಿದ ಅವರು, ಹಾಸನದಲ್ಲಿ ಐಟಿ ಕಂಪನಿಗಳು, ತಂತ್ರಜ್ಞಾನ ಆಧಾರಿತ ಕೈಗಾರಿಕೆಗಳು ಹಾಗೂ ಐಟಿ ಹಬ್ ಸ್ಥಾಪನೆಯಾಗಬೇಕು. ಇದರಿಂದ ಜಿಲ್ಲೆಯ ಯುವಕರಿಗೆ ಸ್ಥಳೀಯವಾಗಿ ಉದ್ಯೋಗಾವಕಾಶಗಳು ಸೃಷ್ಟಿಯಾಗಲಿವೆ. ನೂತನ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನೇತೃತ್ವದಲ್ಲಿ ಈ ಕನಸು ನನಸಾಗುವ ನಿರೀಕ್ಷೆಯಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಮುಖಂಡರಾದ ಅನು, ರಘು ದಾಸರಕೊಪ್ಪಲು, ಬೂದೇಶ್, ಆರೀಫ್, ವೆಂಕಟೇಗೌಡ, ತಂಬ್ಲಾಪುರ ಗಣೇಶ್, ಲವಕುಮಾರ್, ಅಶ್ರು ಸೇರಿದಂತೆ ಅನೇಕ ಕಾರ್ಯಕರ್ತರು ಹಾಗೂ ಅಭಿಮಾನಿಗಳು ಭಾಗವಹಿಸಿದ್ದರು.

# ಹಾಸನ ಜುಮ್ಮಾ ಮಸೀದಿ ಸರ್ಕಾರಿ ಉರ್ದು ಶಾಲೆಯ ಪ್ರಗತಿ ನೋಟ

**- ಗೊರೂರು ಅನಂತರಾಜು, ಹಾಸನ.**

ಬೆಳಿಗ್ಗೆ ಎದ್ದು ಮೊಬೈಲ್ ನ್ಯೂಸ್ ನೋಡುತ್ತಾ ಕಾಫಿ ಕುಡಿಯುತ್ತಿದ್ದೆ. ಪೋನ್ ರಿಂಗಣಿಸಿತು. ಆ ಕಡೆಯಿಂದ ಯಾಕೂಬ. ಅಣ್ಣ, ಭಾನುವಾರ ನಾಟಕ ನೋಡಿದ್ರ ಎಂದ. ನೋಡಿದ್ದು ಆಯ್ತು. ವಿಮರ್ಶೆ ಬರೆದಿದ್ದು ಆಯ್ತು..ಎಂದೆ. ಎಲ್ಲಣ್ಣ ಪೇಪರ್‌ನಲ್ಲಿ ಬಂದಿಲ್ಲ. ಮನೆ ಹತ್ತಿರ ಬರ್ತಾ ಇದ್ದೀನಿ.. ಎಂದ. ನೀನು ಕೀ ಪ್ಯಾಡ್ ಪೋನ್ ಇಟ್ಕೊಂಡ್ರೆ



ಪೇಪರ್ ಹೇಗೋ ಕಳಿಸೋದು? ಮನೆ ಹತ್ತಿರ ಬಾ. ಅಕ್ಕ ಟೀ ಮಾಡ್ತಿದ್ದಾಳೆ.. ಎಂದೆ. ಬಂದ. ಸ್ವಾತಂತ್ರ್ಯದ ಓಟ ನಾಟಕ ತುಂಬಾ ಚೆನ್ನಾಗಿತ್ತು ಎಂದ. ಟೀ ಕುಡಿದಾದ ಮೇಲೆ ಬರ್ತೀನಿ ಕಣಣ್ಣ, ಇಲ್ಲೇ ಪಕ್ಕದಲ್ಲೇ ಮಂಜಣ್ಣನ




ಶಾಲೆಯಲ್ಲಿ ಶಿಕ್ಷಣದ ಗೋಡೆಚಿತ್ರ ಬರೆಯಬೇಕು ಎಂದ. ಮಂಜಣ್ಣ ಎಂದರೆ ನಾಯಕರಹಳ್ಳಿ ಮಂಜೇಗೌಡರು. ಹಾಸನ ಜಿಲ್ಲಾ ಕ.ಸಾ.ಪ. ಅಧ್ಯಕ್ಷರಾಗಿದ್ದವರು. ಇವರ ಅವಧಿಯಲ್ಲಿ ನನಗೆ (ಗೊರೂರು ಅನಂತರಾಜು) ಹಾಸನ ತಾ. ಯಲಗುಂದ ಗ್ರಾಮದಲ್ಲಿ ನಡೆದ 5ನೇ ಹಾಸನ ತಾ. ಸಾಹಿತ್ಯ ಸಮ್ಮೇಳನದ (27,28-2-2018) ಸರ್ವಾಧ್ಯಕ್ಷತೆ ಗೌರವ ದೊರಕಿತ್ತು.

ನಾಯಕರಹಳ್ಳಿ ಮಂಜೇಗೌಡರು ವರ್ತಿಕೆರೆ ಹೆಚ್.ಪಿ.ಎಸ್. ನಿಂದ ಸರ್ಕಾರಿ ಉರ್ದು ಕಿರಿಯ ಪ್ರಾಥಮಿಕ ಶಾಲೆ, ಜುಮ್ಮಾ ಮಸೀದಿ, ಅಂಬೇಡ್ಕರ್ ನಗರ ಶಾಲೆಗೆ ತಾ. 22-6-2023ರಂದು ವರ್ಗಾವಣೆಯಾಗಿ ಬಂದ ದಿನಗಳಲ್ಲಿ ಮಕ್ಕಳು ಕೂರಲು ಬೆಂಚಿಲ್ಲದೆ ನೆಲದಲ್ಲಿ ಕೂರುತ್ತಿದ್ದರಂತೆ! ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಘದಿಂದ ಒಂದು ಲಕ್ಷ ವೆಚ್ಚದ ಶೇ.80 ರಷ್ಟು ಹಣವನ್ನು ಪಡೆದು ಉಳಿದ ಶೇ.20 ವೆಚ್ಚವನ್ನು ತಾವೇ ಹಾಕಿ ಕೂರಲು ಬರೆಯಲು ಅನುಕೂಲ ಇರುವ 10 ಡೆಸ್ಕ್ ಖರೀದಿಸಿದ್ದಾರೆ. ಬೇಲೂರು ಸಮಾಜ ಕಲ್ಯಾಣಾಧಿಕಾರಿ ನಿಂಗರಾಜು ನೆರವಿನಲ್ಲಿ 3 ಗ್ರೀನ್ ಬೋರ್ಡ್ ಒದಗಿಸಿದ್ದಾರೆ. ಕುಂದೂರು ಶ್ರೀಕಾಂತ್ ಶಿಕ್ಷಕರ ವ್ಹೀಲ್ ಚೇರ್ ಒದಗಿಸಿದರೆ ಉದ್ದೂರಳ್ಳಿ ಜಯರಾಂ ವೈರ್‌ನಲ್ಲಿ ಹೆಣೆದ 3 ಚೇರ್ ಒದಗಿಸಿದ್ದಾರೆ. ಟಿವಿಯನ್ನು ಕಾರ್ಲೆ ಪ್ರಾಥಮಿಕ ಆರೋಗ್ಯ ಕೇಂದ್ರದ ಡಾ. ತೇಜಸ್ವಿ ನೀಡಿದ್ದಾರೆ. ಮರ್ಕುಲಿ ಗೋಪಾಲಗೌಡರು 3 ಫ್ಯಾನ್ ಗಳನ್ನು, ಹಾಸನಾಂಬ ಚಿಟ್ಸ್ ತಲಾ 20 ಸಾವಿರ ಬೆಲೆಯ ಗಾಡ್ರೇಜ್ ಬೀರು, ಹಾರ್ಲ್ವೋ ವಾಟರ್ ಪ್ಲಾಂಟ್, ಲಯನ್ಸ್ ಕ್ಲಬ್ ಗಿರೀಶ್ ಮತ್ತು ನಾಗೇಶ್ 35 ತಟ್ಟೆ ಲೋಟ, ವರದರಾಜು ಮತ್ತು ದರ್ಪಣ ಗೋಪಾಲ್ ಮಕ್ಕಳಿಗೆ 4 ಜೊತೆ ಸಮವಸ್ತ್ರ ಒದಗಿಸಿದ್ದಾರೆ. ಸೈಯದ್ ಸಜ್ಜಾದ್ ಪಾಶ ಟೈ ಬೆಲ್ಟು ಕೊಟ್ಟಿದ್ದರೆ, ನೂರ್ ಅಹ್ಮದ್ ವಿದ್ಯುತ್ ದುರಸ್ಥಿ ಕಾಮಗಾರಿ ಜೊತೆ ವರಾಂಡ ಕೊಠಡಿ ಕಟ್ಟಿದ್ದಾರೆ. (ಎಸ್.ಕೆ.ಕರೀಂಖಾನ್ ಸಭಾಂಗಣ). ಇನ್ನೂ ಈ ಯಾಕೂಬ್ ಚಿತ್ರ ಬರೆಯಲು ಬಂದಿದ್ದಾನೆ ಅವನನ್ನು ಉಚಿತವಾಗಿ ಬಳಸಿಕೊಳ್ಳುವುದಿಲ್ಲ ಎಂದರು. ಕಲಾವಿದನ್ನು ಹಿಂಬಾಲಿಸಿ ಹೋಗಿದ್ದ ನನಗೆ 3 ವರ್ಷಗಳ ಹಿಂದಿನ ಶಾಲೆಯ ಸ್ಥಿತಿಗತಿ ತಿಳಿಯಿತು. ಕಳೆದ 20 ವರ್ಷಗಳಿಂದ ಶಾಲೆ ಆವರಣದಲ್ಲಿ ವಿದ್ಯುತ್ ಟ್ರಾನ್ಸ್ ಫಾರ್ಮರ್ ಇತ್ತು. ಇದನ್ನು ತೆಗೆಸಲು ಮಾನ್ಯ ಉಸ್ತುವಾರಿ ಸಚಿವರು ಶ್ರೀಯುತ ಕೃಷ್ಣಬೈರೇಗೌಡರಿಗೆ ಮನವಿ ಸಲ್ಲಿಸಿ ಟ್ರಾನ್ಸ್ ಫಾರ್ಮರ್ ಅನ್ನು ಬೇರೆ ಕಡೆ ಶಿಫ್ಟ್ ಮಾಡಿಸಿ ದಾನಿಗಳಿಂದ ಕಾಂಪೌಂಡ್ ನಿರ್ಮಿಸಿದ್ದಾಗಿ ಹೊರಗೆ ಕರೆದು ತೋರಿಸಿದರು. ಆ ದಿನದ ಪೋಟೋ ವಿಡಿಯೋ ಕಳಿಸಿದರು. ಈಗ ಮಕ್ಕಳ ಹಾಜರಾತಿ ಎಷ್ಟು ಎಂದೆ. ನಾನು ಬಂದಾಗ 20 ಈಗ 35 ಇದೆ ಎಂದರು. ಆರು ತಿಂಗಳ ಹಿಂದೆ ಮಣಿ ಆಸ್ಪತ್ರೆಯ





ಡಾ. ದಿನೇಶ್ ಬೈರೇಗೌಡರು ಶಾಲೆಗೆ ಬಂದು ಮಕ್ಕಳಿಗೆ ಉಚಿತ ವೈದ್ಯಕೀಯ ತಪಾಸಣೆ ಮಾಡಿದ್ದನ್ನು ಸ್ಮರಿಸಿದರು.

# ಹಾಸ್ಟೆಲ್‌ನ ಸ್ನಾನದ ಕೊಠಡಿಯಲ್ಲಿ ನೇಣಿಗೆ ಶರಣಾದ ಬಿಎಸ್ಸಿ ವಿದ್ಯಾರ್ಥಿನಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹೊಳೆನರಸೀಪುರ: ಪಟ್ಟಣದ ಬಾಲಕಿಯರ ವಿದ್ಯಾರ್ಥಿ ನಿಲಯದಲ್ಲಿ ಅಂತಿಮ ವರ್ಷದ ಬಿಎಸ್ಸಿ ವಿದ್ಯಾರ್ಥಿನಿಯೊಬ್ಬಳು ಸ್ನಾನದ ಕೊಠಡಿಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ದಾರುಣ ಘಟನೆ ನಡೆದಿದೆ.

ಆತ್ಮಹತ್ಯೆಗೆ ಶರಣಾದ ವಿದ್ಯಾರ್ಥಿನಿಯನ್ನು ಶ್ರೀರಕ್ಷಾ (21 ವರ್ಷ) ಎಂದು ಗುರುತಿಸಲಾಗಿದೆ. ಈಕೆಯು ಮೂಲತಃ ಮೈಸೂರು ಜಿಲ್ಲೆಯ ಚುಂಚನಕಟ್ಟೆ ಗ್ರಾಮದ ಬಸವೇಗೌಡ ಮತ್ತು ಸುವರ್ಣ ದಂಪತಿಯ ಪುತ್ರಿಯಾಗಿದ್ದಾಳೆ. ಶ್ರೀರಕ್ಷಾ ಹೊಳೆನರಸೀಪುರದ ಮಹಿಳಾ ಪ್ರಥಮ ದರ್ಜೆ ಕಾಲೇಜಿನಲ್ಲಿ ತನ್ನ ಅಂತಿಮ ವರ್ಷದ ಬಿಎಸ್ಸಿ ವ್ಯಾಸಂಗ ಮಾಡುತ್ತಿದ್ದಳು ಹಾಗೂ ಇಲ್ಲಿನ ಬಾಲಕಿಯರ ಹಾಸ್ಟೆಲ್‌ನಲ್ಲಿ ಆಶ್ರಯ ಪಡೆದಿದ್ದಳು.

### ಘಟನೆಯ ವಿವರ

ವಿದ್ಯಾರ್ಥಿನಿ ಹಾಸ್ಟೆಲ್‌ನ ಸ್ನಾನದ ಕೊಠಡಿಗೆ ತೆರಳಿ, ಅಲ್ಲಿಯೇ ನೇಣುಬಿಗಿದುಕೊಂಡು ತನ್ನ ಸಾವಿಗೆ ಶರಣಾಗಿದ್ದಾಳೆ. ಓದಿನಲ್ಲಿ ನಿರತಳಾಗಬೇಕಿದ್ದ ಯುವತಿ ಇಂತಹ ಕಠಿಣ ನಿರ್ಧಾರ ತೆಗೆದುಕೊಳ್ಳಲು ನಿಖರವಾದ ಕಾರಣವೇನೆಂದು ಇನ್ನೂ ತಿಳಿದುಬಂದಿಲ್ಲ.

ಘಟನೆಯ ಮಾಹಿತಿ ತಿಳಿದ ತಕ್ಷಣ ಹೊಳೆನರಸೀಪುರ ನಗರ ಠಾಣೆಯ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ, ಮೃತದೇಹ ಹಾಗೂ ಸ್ಥಳದ ಪರಿಶೀಲನೆ ನಡೆಸಿದ್ದಾರೆ.

ಈ ಪ್ರಕರಣವು ಹೊಳೆನರಸೀಪುರ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದ್ದು, ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆಯನ್ನು ಕೈಗೊಂಡಿದ್ದಾರೆ. ವಿದ್ಯಾರ್ಥಿನಿಯ ಸಾವಿನ ಸುದ್ದಿ ಕೇಳಿ ಪೋಷಕರ ಆಕ್ರಂದನ ಮುಗಿಲುಮುಟ್ಟಿದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248